**All India Radio: Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**13.08.2026 07.35 a.m.**

**<><><><>**

ಮುಖ್ಯಾಂಶಗಳು

1. ವಿದೇಶಿ ಕೊಡುಗೆ ನಿಯಂತ್ರಣ ತಿದ್ದುಪಡಿ ಮಸೂದೆ ೨೦೨೬ ಅನ್ನು ಹೆಚ್ಚಿನ ಪರಿಶೀಲನೆಗಾಗಿ ಜಂಟಿ ಸಂಸದೀಯ ಸಮಿತಿಗೆ ರವಾನಿಸಿದ ಲೋಕಸಭೆ
2. ಪರಿಶಿಷ್ಟ ಜಾತಿಗಳ ರಾಷ್ಟ್ರೀಯ ಆಯೋಗದಿಂದ ರಾಷ್ಟ್ರಪತಿ ಅವರಿಗೆ ೨೦೨೪-೨೫ನೇ ಸಾಲಿನ ವಾರ್ಷಿಕ ವರದಿ ಸಲ್ಲಿಕೆ
3. ಕೇಂದ್ರ ಗೃಹ ಸಚಿವರಿಂದ ಗ್ರಾಮೀಣ ಜ್ಞಾನ ಸೇತು ಆಪ್ ಲೋಕಾರ್ಪಣೆ
4. ಮುಂದಿನ ತಿಂಗಳು ದೆಹಲಿಯಲ್ಲಿ ಭಾರತ-ಅಫ್ಘಾನಿಸ್ತಾನ ಟಿ-೨೦ ಸರಣಿ ; ಬಿಸಿಸಿಐ ಹಾಗೂ ಎಸಿಬಿ ಕ್ರಿಕೆಟ್ ಮಂಡಳಿಗಳ ಅಧಿಕೃತ ಘೋಷಣೆ

<><><><>

ವಿದೇಶಿ ಕೊಡುಗೆ ನಿಯಂತ್ರಣ ತಿದ್ದುಪಡಿ ಮಸೂದೆ ೨೦೨೬ ಅನ್ನು ಹೆಚ್ಚಿನ ಪರಿಶೀಲನೆಗಾಗಿ ಜಂಟಿ ಸಂಸದೀಯ ಸಮಿತಿಗೆ ರವಾನಿಸಲು ಸಂಸತ್ತಿನ ಎರಡೂ ಸದನಗಳು ಅನುಮೋದನೆ ನೀಡಿವೆ.ವಿದೇಶಿ ಕೊಡುಗೆ ನಿಯಂತ್ರಣ ಕಾಯ್ದೆ ೨೦೧೦ ಅನ್ನು ಮತ್ತಷ್ಟು ತಿದ್ದುಪಡಿ ಮಾಡುವ ಗುರಿಯನ್ನು ಈ ಮಸೂದೆ ಹೊಂದಿದೆ. ವಿದೇಶಿ ಕೊಡುಗೆಗಳ ಬಳಕೆಯನ್ನು ಹೆಚ್ಚು ಪಾರದರ್ಶಕ ಮತ್ತು ಜವಾಬ್ದಾರಿಯುತವಾಗಿಸುವುದು ಈ ಮಸೂದೆಯ ಉದ್ದೇಶವಾಗಿದೆ.ವಿಶಾಲ ಸಮಾಲೋಚನೆಗಾಗಿ ಉಭಯ ಸದನಗಳ ಸದಸ್ಯರನ್ನು ಒಳಗೊಂಡ ಜೆಪಿಸಿಗೆ ಮಸೂದೆಯನ್ನು ರವಾನಿಸಲು ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಲೋಕಸಭೆಯಲ್ಲಿ ಪ್ರಸ್ತಾವನೆಯನ್ನು ಮಂಡಿಸಿದರು. ಸಮಿತಿಯು ಸ್ಪೀಕರ್ ನಾಮನಿರ್ದೇಶನ ಮಾಡಿದ ಲೋಕಸಭೆಯ ೨೧ ಸದಸ್ಯರು ಮತ್ತು ಅಧ್ಯಕ್ಷರು ನಾಮನಿರ್ದೇಶನ ಮಾಡಿದ ರಾಜ್ಯಸಭೆಯ ೧೦ ಸದಸ್ಯರನ್ನು ಒಳಗೊಂಡಿರುತ್ತದೆ. ಸಮಿತಿಯು ಚಳಿಗಾಲದ ಅಧಿವೇಶನದ ಮೊದಲ ವಾರದ ಕೊನೆಯ ದಿನದೊಳಗೆ ಈ ಸದನಕ್ಕೆ ತನ್ನ ವರದಿಯನ್ನು ಸಲ್ಲಿಸುತ್ತದೆ.ಎಫ್‌ಸಿಆರ್‌ಎ ತಿದ್ದುಪಡಿ ಮಸೂದೆ,

೨೦೨೬ ರ ಪರಿಗಣನೆಗೆ ತನ್ನ ಕಡೆಯಿಂದ ೧೦ ಸದಸ್ಯರನ್ನು ಜಂಟಿ ಸಮಿತಿಗೆ ನಾಮನಿರ್ದೇಶನ ಮಾಡುವ ಪ್ರಸ್ತಾವನೆಯನ್ನು ರಾಜ್ಯಸಭೆಯು ಸಹ ಅನುಮೋದಿಸಿದೆ..

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ನವದೆಹಲಿಯಲ್ಲಿ ನಡೆಯಲಿರುವ ವಿಶೇಷ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ೨೦೨೪ ಮತ್ತು ೨೦೨೫ನೇ ಸಾಲಿನ ಸಂಗೀತ ನಾಟಕ ಅಕಾಡೆಮಿ ಫೆಲೋಶಿಪ್‌ಗಳು ಹಾಗೂ ಪ್ರಶಸ್ತಿಗಳನ್ನು ೧೧೫ ಕ್ಕೂ ಹೆಚ್ಚು ಕಲಾವಿದರಿಗೆ ಪ್ರದಾನ ಮಾಡಲಿದ್ದಾರೆ. ಈ ಸಂದರ್ಭದಲ್ಲಿ ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಮತ್ತು ಸಂಸ್ಕೃತಿ ರಾಜ್ಯ ಸಚಿವ ರಾವ್ ಇಂದರ್‌ಜಿತ್ ಸಿಂಗ್ ಉಪಸ್ಥಿತರಿರಲಿದ್ದಾರೆ.

<><><>

ಪರಿಶಿಷ್ಟ ಜಾತಿಗಳ ರಾಷ್ಟ್ರೀಯ ಆಯೋಗ - ಎನ್‌ಸಿಎಸ್‌ಸಿ ೨೦೨೪-೨೫ನೇ ಸಾಲಿನ ತನ್ನ ವಾರ್ಷಿಕ ವರದಿಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ರಾಷ್ಟ್ರಪತಿ ಭವನದಲ್ಲಿ ಸಲ್ಲಿಸಿದೆ. ಈ ಸಂದರ್ಭದಲ್ಲಿ, ಪರಿಶಿಷ್ಟ ಜಾತಿಗಳಿಗೆ ಸಾಂವಿಧಾನಿಕ ರಕ್ಷಣೆಗಳು ಮತ್ತು ಕಲ್ಯಾಣ ಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅಸ್ತಿತ್ವದಲ್ಲಿರುವ ಕಾರ್ಯವಿಧಾನಗಳನ್ನು ಬಲಪಡಿಸುವ ಮತ್ತು ಸುವ್ಯವಸ್ಥಿತಗೊಳಿಸುವ ಗುರಿಯನ್ನು ಹೊಂದಿರುವ ಕ್ರಮಗಳನ್ನು ರೂಪಿಸಲು ರಾಷ್ಟ್ರಪತಿಗಳು ಆಯೋಗಕ್ಕೆ ನಿರ್ದೇಶನ ನೀಡಿದರು. ಈ ವರದಿಯು ಪರಿಶಿಷ್ಟ ಜಾತಿಗಳಿಗೆ ಸಾಂವಿಧಾನಿಕ ನಿಬಂಧನೆಗಳ ಕಾರ್ಯನಿರ್ವಹಣೆಯ ಸಮಗ್ರ ವಿಮರ್ಶೆಯನ್ನು ಪ್ರಸ್ತುತಪಡಿಸುತ್ತದೆ. ಪರಿಶಿಷ್ಟ ಜಾತಿಗೆ ಕಲ್ಯಾಣ ಯೋಜನೆಗಳು ಮತ್ತು ಸಾಮಾಜಿಕ-ಆರ್ಥಿಕ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳೊಂದಿಗೆ ವ್ಯಾಪಕವಾದ ವಿಮರ್ಶೆಗಳು, ಸ್ಥಳ ಭೇಟಿಗಳು ಮತ್ತು ಸಮಾಲೋಚನೆಗಳಿಂದ ಪಡೆದ ಪ್ರಮುಖ ಸಂಶೋಧನೆಗಳನ್ನು ವರದಿ ಒಳಗೊಂಡಿದೆ ಎಂದು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ತಿಳಿಸಿದೆ.

<><><>

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ವಿಚಾರದ ಪ್ರತಿಭಟನೆಯ ಸಮಯದಲ್ಲಿ ನಡೆದ ಹಲವು ಘಟನೆಗಳ ಕುರಿತು ವಿವರವಾದ ಚರ್ಚೆಗೆ ತಾವು ಮುಕ್ತವಾಗಿದ್ದೇವೆ ಎಂದು ಗೃಹ ಸಚಿವ ಅಮಿತ್ ಶಾ ಅವರು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಮತ್ತೊಮ್ಮೆ ಪತ್ರ ಬರೆದಿದ್ದಾರೆ ಎಂದು ಸಂಸದೀಯ

ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ಸಂಸತ್ತಿನ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಸರ್ಕಾರವೇ ಚರ್ಚೆಗೆ ಸಿದ್ಧವಿದ್ದು, ಉತ್ತರಗಳನ್ನು ನೀಡುತ್ತದೆ ಎಂದು ಹೇಳುತ್ತಿದ್ದರೂ, ಪ್ರತಿಪಕ್ಷಗಳು ಉತ್ತರಗಳನ್ನು ಕೇಳಲು ಬಯಸದೇ ಚರ್ಚೆಯಿಂದ ಹಿಂದೆ ಸರಿಯುತ್ತಿವೆ ಎಂದು ಹೇಳಿದ್ದಾರೆ.

ಧ್ವನಿ : ಕಿರಣ್ ರಿಜಿಜು

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನಿನ್ನೆ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಗ್ರಾಮೀಣ ಜ್ಞಾನ ಸೇತು ಅಪ್ಲಿಕೇಶನ್ ಅನ್ನು ಲೋಕಾರ್ಪಣೆ ಮಾಡಿದರು. ಗುಜರಾತ್‌ನ ಗಾಂಧಿನಗರ ಲೋಕಸಭಾ ಕ್ಷೇತ್ರದಲ್ಲಿ ಗ್ರಂಥಾಲಯಗಳನ್ನು ಸಂಯೋಜಿಸಲು ಈ ಅಪ್ಲಿಕೇಶನ್ ಅನ್ನು ಅಭಿವೃದ್ಧಿಪಡಿಸಲಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಷ್ಟ್ರೀಯ ಗ್ರಂಥಾಲಯ ದಿನವಾಗಿ ಆಚರಿಸಲಾಗುವ ಪದ್ಮಶ್ರೀ ಎಸ್.ಆರ್ ರಂಗನಾಥನ್ ಅವರ ಜನ್ಮ ದಿನಾಚರಣೆಯಂದು ಈ ಅಪ್ಲಿಕೇಶನ್ ಅನ್ನು ಪ್ರಾರಂಭಿಸಲಾಗಿದೆ. ಮಕ್ಕಳು ಓದಲು ಮತ್ತು ಕಲಿಯಲು ಪ್ರೋತ್ಸಾಹಿಸಲು ಪ್ರತಿ ಗ್ರಾಮದಲ್ಲಿ, ಮುಖ್ಯವಾಗಿ ಶಾಲೆಗಳ ಬಳಿ ಗ್ರಂಥಾಲಯವನ್ನು ಸ್ಥಾಪಿಸುವುದು ಇದರ ಉದ್ದೇಶವಾಗಿದೆ ಎಂದು ಹೇಳಿದರು. ಸುಮಾರು ೯೩ ಗ್ರಾಮ ಗ್ರಂಥಾಲಯಗಳನ್ನು ಈಗಾಗಲೇ ಸ್ಥಾಪಿಸಲಾಗಿದ್ದು, ೭ ನೂರ ೫೧ ಗ್ರಂಥಾಲಯಗಳನ್ನು ಈಗ ಅಪ್ಲಿಕೇಶನ್ ಮೂಲಕ ಸಂಪರ್ಕಿಸಲಾಗಿದೆ. ಸುಮಾರು ಎರಡು ಲಕ್ಷ ೮೦ ಸಾವಿರ ಪುಸ್ತಕಗಳನ್ನು ಹೊಂದಿರುವ ನಾಲ್ಕು ಗ್ರಂಥಾಲಯಗಳನ್ನು ಗ್ರಾಮೀಣ ಗ್ರಂಥಾಲಯಗಳೊಂದಿಗೆ ಸಂಪರ್ಕಿಸಲಾಗಿದೆ ಎಂದು ಸಚಿವರು ತಿಳಿಸಿದರು.

<><><><>

ಸಂಸತ್ತು ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮ (ತಿದ್ದುಪಡಿ) ಮಸೂದೆ, ೨೦೨೯ ಅನ್ನು ಅಂಗೀಕರಿಸಿದೆ. ಈ ಮಸೂದೆಯು ನಿಗಮಕ್ಕೆ ಕೈಗಾರಿಕಾ ಸರಕುಗಳ ಕ್ಷೇತ್ರದಲ್ಲಿ ತನ್ನ ಚಟುವಟಿಕೆಗಳನ್ನು ಕೈಗೊಳ್ಳಲು ಅನುಮತಿಸುತ್ತದೆ. ಸಹಕಾರ ಅಭಿವೃದ್ಧಿಯಲ್ಲಿ ತೊಡಗಿರುವ ಯಾವುದೇ ಸಂಸ್ಥೆಗೆ ನಿಗಮದಿಂದ ಧನಸಹಾಯವನ್ನು ವಿಸ್ತರಿಸಲು ಈ ಶಾಸನವು ರಾಜ್ಯ ಸರ್ಕಾರಗಳಿಗೆ ಅನುಮತಿ ನೀಡುತ್ತದೆ. ಸಂಸತ್ತು ಕೇರಳ ಹೆಸರು ಬದಲಾವಣೆ ಮಸೂದೆ, ೨೦೨೯

ಅನ್ನು ಸಹ ಅಂಗೀಕರಿಸಿದೆ. ಸಂವಿಧಾನದ ಮೊದಲ ಪರಿಚ್ಛೇದದಲ್ಲಿ ಕೇರಳ ರಾಜ್ಯದ ಹೆಸರನ್ನು 'ಕೇರಳಂ' ಎಂದು ಬದಲಾಯಿಸಲು ಈ ಮಸೂದೆಯು ಪ್ರಸ್ತಾಪಿಸುತ್ತದೆ.

<><><>

ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಅವರು, ಸಚಿವಾಲಯದ ಹಿರಿಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, 'ನ್ಯಾಷನಲ್ ಮೀನ್ಸ್-ಕಮ್-ಮೆರಿಟ್ ಸ್ಕಾಲರ್‌ಶಿಪ್ ಯೋಜನೆ'ಯನ್ನು ೨೦೨೬-೨೭ ರಿಂದ ೨೦೩೦-೩೧ ರವರೆಗೆ ಮುಂದುವರಿಸುವ ಪ್ರಸ್ತಾವನೆಯನ್ನು ಚರ್ಚಿಸಲು ಸಭೆಯನ್ನು ಕರೆಯಲಾಗಿತ್ತು ಎಂದು ಅವರು ತಿಳಿಸಿದ್ದಾರೆ. ಸಭೆಯಲ್ಲಿ ಯೋಜನೆಯ ಪ್ರಮುಖ ಅಂಶಗಳು ಮತ್ತು ದೇಶಾದ್ಯಂತ ವಿದ್ಯಾರ್ಥಿಗಳನ್ನು ಬೆಂಬಲಿಸಲು ಅದರ ನಿರಂತರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಚರ್ಚೆಗಳು ನಡೆದವು.

<><><>

ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ - ಸಿಬಿಎಸ್‌ಇ ೧೨ನೇ ತರಗತಿಯ ಪೂರಕ ಪರೀಕ್ಷೆಯ ೨೦೨೬ ರ ಫಲಿತಾಂಶಗಳನ್ನು ಪ್ರಕಟಿಸಿದೆ. ವಿದ್ಯಾರ್ಥಿಗಳು ತಮ್ಮ ಫಲಿತಾಂಶವನ್ನು ಡಿಜಿಲಾಕರ್ ಫಲಿತಾಂಶ ಪೋರ್ಟಲ್ ಮೂಲಕ results.digilocker.gov.in ನಲ್ಲಿ ಪರಿಶೀಲಿಸಬಹುದು.

<><><>

ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ ಮತ್ತು ಅಫ್ಘಾನಿಸ್ತಾನ ಕ್ರಿಕೆಟ್ ಮಂಡಳಿ ಮುಂದಿನ ತಿಂಗಳು ೧೩ ರಿಂದ ೧೭ ರವರೆಗೆ ದೆಹಲಿಯ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಮೂರು ಪಂದ್ಯಗಳ ಟಿ-೨೦ ಅಂತಾರಾಷ್ಟ್ರೀಯ ಸರಣಿಯನ್ನು ಆಯೋಜಿಸಲಿವೆ. ಈ ಸರಣಿಯು ಅಫ್ಘಾನಿಸ್ತಾನದ ಭವಿಷ್ಯದ ಪ್ರವಾಸ ಕಾರ್ಯಕ್ರಮದ ಭಾಗವಾಗಿದೆ. ಅಫ್ಘಾನಿಸ್ತಾನದಲ್ಲಿ ಕ್ರಿಕೆಟ್ ಬೆಳವಣಿಗೆಯನ್ನು ಬೆಂಬಲಿಸಲು ಮತ್ತು ತನ್ನ ಆಟಗಾರರಿಗೆ ಉನ್ನತ ಮಟ್ಟದಲ್ಲಿ ಸ್ಪರ್ಧಿಸಲು ಅವಕಾಶಗಳನ್ನು ಒದಗಿಸಲು ಬಿಸಿಸಿಐ ಬದ್ಧವಾಗಿದೆ ಎಂದು ಬಿಸಿಸಿಐ ಅಧ್ಯಕ್ಷ ಮಿಥುನ್ ಮನ್ಹಾಸ್ ಹೇಳಿದ್ದಾರೆ.

<><><>

ಕೆನಡಿಯನ್ ಓಪನ್ ಟೆನ್ನಿಸ್‌ನಲ್ಲಿ, ಪುರುಷರ ಮತ್ತು ಮಹಿಳೆಯರ ಸೆಮಿ ಫೈನಲ್ ಪಂದ್ಯಗಳ ಪಟ್ಟಿ ಅಧಿಕೃತವಾಗಿ ಅಂತಿಮಗೊಂಡಿದೆ. ಮಹಿಳೆಯರ ಸಿಂಗಲ್ಸ್‌ನಲ್ಲಿ, ಫೈನಲ್‌ನಲ್ಲಿ ಸ್ಥಾನ ಪಡೆಯಲು ಟೊರೊಂಟೊದಲ್ಲಿ ನಡೆಯುವ ಪಂದ್ಯದಲ್ಲಿ ಪೋಲೆಂಡ್‌ನ ಏಳನೇ ಶ್ರೇಯಾಂಕದ ಇಗಾ ಶ್ವಿಯಾಂಟೆಕ್, ಉಕ್ರೇನ್‌ನ ಒಂಬತ್ತನೇ ಶ್ರೇಯಾಂಕದ ಎಲಿನಾ ಸ್ವಿಟೋಲಿನಾ ಅವರನ್ನು

ಎದುರಿಸಲಿದ್ದಾರೆ. ಕ್ವಾರ್ಟರ್‌ಫೈನಲ್‌ನಲ್ಲಿ ಸ್ವಿಯಾಂಟೆಕ್ ಅವರು ೧೫ನೇ ಶ್ರೇಯಾಂಕದ ಡಯಾನಾ ಶ್ನೈಡರ್ ಅವರನ್ನು ೬-೨, ೬-೧ ಸೆಟ್‌ಗಳಿಂದ ಸೋಲಿಸಿದರೆ, ಸ್ವಿಟೋಲಿನಾ ಅವರು ರಷ್ಯಾದ ಎಕಟೆರಿನಾ ಅಲೆಕ್ಸಾಂಡ್ರೋವಾ ಅವರನ್ನು ೩-೬, ೬-೦, ೬-೩ ಸೆಟ್‌ಗಳಿಂದ ಪರಾಭವಗೊಳಿಸಿದರು.

<><><><>

ಬಂಗಾಳಕೊಲ್ಲಿಯ ಉತ್ತರ ಭಾಗದಲ್ಲಿ ಕಡಿಮೆ ಒತ್ತಡದ ಪ್ರದೇಶ ನಿರ್ಮಾಣವಾಗಿದೆ. ಇದರ ಪರಿಣಾಮವಾಗಿ ಒಡಿಶಾ ಮತ್ತು ಪಶ್ಚಿಮ ಬಂಗಾಳದ ಗಂಗಾನದಿಯಲ್ಲಿ ಇಂದು ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ - ಐಎಂಡಿ ತಿಳಿಸಿದೆ. ಕರ್ನಾಟಕ, ಪೂರ್ವ ಉತ್ತರ ಪ್ರದೇಶ, ಗುಜರಾತ್, ತಮಿಳುನಾಡು, ಕಾರೈಕಲ್, ಪುದುಚೇರಿ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಕೇರಳ, ಗೋವಾ ಮತ್ತು ರಾಜಸ್ಥಾನಗಳಲ್ಲಿ ಇಂದು ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮಧ್ಯಪ್ರದೇಶ, ಛತ್ತೀಸ್‌ಗಢ, ಹಿಮಾಚಲ ಪ್ರದೇಶ, ಜಾರ್ಖಂಡ್, ಜಮ್ಮು ಮತ್ತು ಕಾಶ್ಮೀರ, ಲಡಾಖ್, ಮಧ್ಯ ಮಹಾರಾಷ್ಟ್ರ, ಉತ್ತರಾಖಂಡ ಮತ್ತು ಭಾರತದ ಈಶಾನ್ಯ ಭಾಗಗಳಲ್ಲಿ ಈ ತಿಂಗಳ ೧೫ ರವರೆಗೆ ಇದೇ ರೀತಿಯ ಹವಾಮಾನ ಪರಿಸ್ಥಿತಿ ಇರಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><><><>

ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್ ಪಂಜಾಬ್‌ನಲ್ಲಿ ೪೫೪ ಫಾರ್ಮಸಿ ಅಧಿಕಾರಿಗಳ ನೇಮಕಾತಿ ಪ್ರಕ್ರಿಯೆಗೆ ಮುಂದಿನ ತಿಂಗಳ ೧೭ನೇ ತಾರೀಖಿನ ವಿಚಾರಣೆಯವರೆಗೆ ತಡೆ ನೀಡಿದೆ. ಕಳೆದ ತಿಂಗಳ ೧೯ ರಂದು ಪಂಜಾಬ್‌ನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಡಿಯಲ್ಲಿ ೪೫೪ ಫಾರ್ಮಸಿ ಅಧಿಕಾರಿಗಳ ನೇಮಕಾತಿಗಾಗಿ ನಡೆಸಲಾದ ಲಿಖಿತ ಪರೀಕ್ಷೆಯನ್ನು ರದ್ದುಗೊಳಿಸುವಂತೆ ಕೋರಿ ಕೇಶವ್ ಕಾಂಬೋಜ್ ಮತ್ತು ಇತರರು ಸಲ್ಲಿಸಿದ್ದ ಅರ್ಜಿಯ ಮೇರೆಗೆ ನ್ಯಾಯಮೂರ್ತಿ ಸಂದೀಪ್ ಮೌದ್ಗಿಲ್ ಈ ತಡೆಯಾಜ್ಞೆ ನೀಡಿದ್ದಾರೆ. ಈ ಪರೀಕ್ಷೆಯು ಸುಸಂಘಟಿತ ವಂಚನೆ ಜಾಲದಿಂದ ಕಲುಷಿತಗೊಂಡಿದೆ ಎಂದು ಅರ್ಜಿಯಲ್ಲಿ ವಾದಿಸಲಾಗಿತ್ತು. ಕಳೆದ ತಿಂಗಳ ೨೮ ರಂದು ಹೊರಡಿಸಿದ ಮಧ್ಯಂತರ ಆದೇಶದಲ್ಲಿ, ಮುಂದಿನ ಆಯ್ಕೆ ಪ್ರಕ್ರಿಯೆಯು ಈ ಪ್ರಸ್ತುತ ಅರ್ಜಿಯ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ ಎಂದು ನ್ಯಾಯಾಲಯ ನಿರ್ದೇಶಿಸಿತ್ತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>